ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1667(1958)
ಮಾನ್ಯ ಸದಸ್ಯರ ಹೆಸರು	:	ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	23-03-2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುತ್ತಿರುವ ಘನ ತ್ಯಾಜ್ಯ ವಿಲೇವಾರಿ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ.	• ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಪ್ರತಿ ದಿನ 60 ಟನ್ ಘನ ತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು, ಘನತ್ಯಾಜ್ಯ ವಸ್ತುಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಮಂಡ್ಯ ನಗರಸಭೆಯು ಘನತ್ಯಾಜ್ಯ ವಸ್ತುಗಳ ನಿರ್ವಹಣೆ ನಿಯಮಗಳು 2016ರ ರೀತ್ಯಾ ಹಸಿಕಸ ಹಾಗೂ ಒಣ ತ್ಯಾಜ್ಯವನ್ನು ಮೂಲದಲ್ಲಿಯೇ ಬೇರ್ಪಡಿಸಿ ಪ್ರತ್ಯೇಕವಾಗಿ 18 ವಾರ್ಡ್‌ಗಳಿಂದ ಸಂಗ್ರಹಿಸಲು ಕ್ರಮ ವಹಿಸಿದೆ. • ಮರುಬಳಕೆಯಾಗುವ ತ್ಯಾಜ್ಯವನ್ನು ಅಧೀಕೃತ ಮರುಬಳಕೆ ಕೇಂದ್ರಕ್ಕೆ (Athorised recyclers) ಸಾಗಾಣಿಕೆ ಮಾಡಲಾಗುತ್ತಿದೆ. ವಿಕೇಂದ್ರೀಕೃತ ತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ 2 ಟನ್ ಹಸಿ ತ್ಯಾಜ್ಯವನ್ನು ಸಂಗ್ರಹಿಸಿ ಸಂಸ್ಕರಣೆ ಮಾಡಲಾಗುತ್ತಿದೆ. • ನೆಲಭರ್ತಿ ಜಾಗದಲ್ಲಿ ಪ್ರತಿದಿನ ಮನೆ-ಮನೆಯಿಂದ ಸಂಗ್ರಹವಾಗುವ 6 ಟನ್ ಹಸಿ ತ್ಯಾಜ್ಯವನ್ನು ಏರೋಬಿಕ್ ವಿಧಾನದ ಮೂಲಕ ಸಂಸ್ಕರಣೆ ಮಾಡಲಾಗುತ್ತಿದೆ. ಇನ್ನುಳಿದ ಮಿಶ್ರ ತ್ಯಾಜ್ಯವನ್ನು ನೆಲಭರ್ತಿ ಜಾಗದಲ್ಲಿ ವಿಂಡ್‌ರೋ ವಿಧಾನದ ಮೂಲಕ ಸಂಸ್ಕರಣೆಯನ್ನು ಮಾಡಲಾಗುತ್ತಿದೆ.
ಆ	ಘನ ತ್ಯಾಜ್ಯ ನಿರ್ವಹಣೆಗೆ ಆಧುನಿಕ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲು ಯೋಜನೆಯನ್ನು ಸಿದ್ಧಪಡಿಸಲಾಗಿದೆಯೇ; ಇದಕ್ಕಾಗಿ ಸರ್ಕಾರ ಮೀಸಲಿಟ್ಟ ಹಣವೆಷ್ಟು (ವಿವರ ನೀಡುವುದು)	• ಹೌದು, ಮಂಡ್ಯ ನಗರಸಭೆಗೆ ಸಂಬಂಧಿಸಿದಂತೆ ಘನತ್ಯಾಜ್ಯ ವಸ್ತುಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ರೂ. 8.68 ಕೋಟಿಗಳ ವಿಸ್ತೃತವಾದ ಯೋಜನಾ ವರದಿಯನ್ನು ತಯಾರಿಸಿ ಸರ್ಕಾರದಿಂದ ಅನುಮೋದನೆ ನೀಡಲಾಗಿರುತ್ತದೆ. • ಸದರಿ ಅನುದಾನದ ಪೈಕಿ ರೂ. 2.33 ಕೋಟಿಗಳ ಅನುದಾನವನ್ನು ವಾಹನ-ಯಂತ್ರೋಪಕರಣಗಳ ಖರೀದಿಗೆ ಮತ್ತು ರೂ. 6.35 ಕೋಟಿಗಳ ಅನುದಾನವನ್ನು ಸಿವಿಲ್ ಕಾಮಗಾರಿಗಳಿಗೆ ಮೀಸಲಿಡಲಾಗಿದೆ.
ಇ	ನಗರದ ಸಾರ್ವಜನಿಕ ರಸ್ತೆ ಹಾಗೂ ಖಾಲಿ ಜಾಗಗಳಲ್ಲಿ ತ್ಯಾಜ್ಯವನ್ನು ಹಾಕುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	• ನಗರಸಭೆಯು ಸಾರ್ವಜನಿಕ ರಸ್ತೆಯಲ್ಲಿ ತ್ಯಾಜ್ಯವನ್ನು ಹಾಕುವುದನ್ನು ತಪ್ಪಿಸಲು ಆಟೋಟಿಪ್ಪರ್ ಮೂಲಕ ಮನೆ ಮನೆಯಿಂದ ಕಸವನ್ನು ಸಂಗ್ರಹಣೆ ಮಾಡಲಾಗುತ್ತಿದೆ. • ಘನತ್ಯಾಜ್ಯ ವಸ್ತುಗಳ ನಿರ್ವಹಣೆ ಅಧಿನಿಯಮ 2016ರ ರೀತ್ಯಾ

		ಬೈಲಾವನ್ನು ಅಳವಡಿಸಿಕೊಳ್ಳಲಾಗಿದ್ದು, ಅದರನ್ವಯ ಎಲ್ಲೆಂದರಲ್ಲಿ ತ್ಯಾಜ್ಯವನ್ನು ಬಿಸಾಡುವವರಿಗೆ ದಂಡ ಹಾಕಲು ಕ್ರಮ ವಹಿಸಲಾಗುತ್ತಿದೆ. • ತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕರ ಪಾತ್ರದ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಆಟೋ ಪ್ರಚಾರ, ಕರಪತ್ರ ವಿತರಣೆ, ಮತ್ತು ಜಾಥಾ ಕಾರ್ಯಕ್ರಮಗಳನ್ನು ನಗರಸಭೆ ವತಿಯಿಂದ ಆಯೋಜಿಸಲಾಗಿದೆ.

ಸಂಖ್ಯೆ: ನಅಇ 62 ಸಿಎಸ್‌ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ ಹಾಗೂ ಸಕ್ಕರೆ ಸಚಿವರು.